**All India Radio: Bangalore**
**Regional Bulletin In Kannada**
**20.06.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**20.06.2026 / 2.30 p.m.**

**<><><><>**

ಮುಖ್ಯಾಂಶಗಳು

1. ಹುಬ್ಬಳ್ಳಿ-ಗದಗ ಬೈಪಾಸ್ ಮೂಲಕ ಗೋಲ್ ಗುಂಬಜ್ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ರೈಲ್ವೆ ಮಂಡಳಿ ಒಪ್ಪಿಗೆ ; ಸಚಿವ ಎಂ.ಬಿ.ಪಾಟೀಲ್ ಹರ್ಷ
2. ವಿಧಾನಪರಿಷತ್ ಚುನಾವಣಾ ಫಲಿತಾಂಶದಿಂದ ಬಿಜೆಪಿ, ಜೆಡಿಎಸ್ ಮೈತ್ರಿಗೆ ಯಾವುದೇ ಧಕ್ಕೆ ಇಲ್ಲ ; ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ
3. ಗೃಹಲಕ್ಷ್ಮಿ ಯೋಜನೆಯಲ್ಲಿ ಅಕ್ರಮದ ಆರೋಪ ; ಸಿಬಿಐ ತನಿಖೆಗೆ ಬಿಜೆಪಿ ನಾಯಕ ಆರ್.ಅಶೋಕ ಆಗ್ರಹ
4. ಸಿಕಲ್‌ಸೆಲ್ ಅನಿಮಿಯಾ ಸ್ಕ್ರೀನಿಂಗ್‌ನಲ್ಲಿ ಮೈಸೂರು ಜಿಲ್ಲೆ ಶೇಕಡಾ ೧೦೦ ರಷ್ಟು ಪ್ರಗತಿ

<><><><>

ಮೈಸೂರು-ಪಂಡಾರಪುರ ನಡುವೆ ಸಂಚರಿಸುವ ಗೋಲ್ ಗುಂಬಜ್ ಎಕ್ಸ್‌ಪ್ರೆಸ್ ರೈಲನ್ನು ಇನ್ನು ಮುಂದೆ ಹುಬ್ಬಳ್ಳಿ ಮತ್ತು ಗದಗ ಬೈಪಾಸ್‌ಗಳ ಮೂಲಕ ಸಂಚರಿಸಲು ರೈಲ್ವೆ ಮಂಡಳಿ ಒಪ್ಪಿಗೆ ನೀಡಿದೆ. ಇದರಿಂದ ವಿಜಯಪುರ ಮತ್ತು ಬಾಗಲಕೋಟೆ ಜನರ ಬಹುದಿನಗಳ ಬೇಡಿಕೆಗೆ ಮನ್ನಣೆ ಸಿಕ್ಕಂತಾಗಿದ್ದು, ಎರಡೂ ನಗರಗಳ ನಡುವಿನ ಪ್ರಯಾಣದ ಅವಧಿ ಸುಮಾರು ೫೫ ನಿಮಿಷಗಳಷ್ಟು ಕಡಿತಗೊಳ್ಳಲಿದೆ ಎಂದು ಸಚಿವ ಎಂ.ಬಿ.ಪಾಟೀಲ್ ಹರ್ಷ ವ್ಯಕ್ತಪಡಿಸಿದ್ದಾರೆ. ವಿಜಯಪುರದೆಡೆಗೆ ಸಂಚರಿಸುವ ರೈಲುಗಳನ್ನು ಬೈಪಾಸ್ ಮೂಲಕವೇ ಕಾರ್ಯ ನಿರ್ವಹಿಸಬೇಕೆಂದು ನಿರಂತರವಾಗಿ ಪತ್ರ ವ್ಯವಹಾರ ಮತ್ತು ಸಭೆಗಳನ್ನು ನಡೆಸಿ ಕೇಂದ್ರ ಸರ್ಕಾರದ ಗಮನ ಸೆಳೆಯಲಾಗಿತ್ತು. ಈ ಕೋರಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿರುವ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಸಚಿವ ಎಂ.ಬಿ.ಪಾಟೀಲ್ ಅಭಿನಂದನೆ ಸಲ್ಲಿಸಿದ್ದಾರೆ. ಇನ್ನು ಮುಂದೆ ಹುಬ್ಬಳ್ಳಿ ಮತ್ತು ಗದಗ ನಗರಗಳ ಊರೊಳಗೆ ರೈಲು ಸಂಚರಿಸದಿದ್ದರೂ ಅಲ್ಲಿನ

ಪ್ರಯಾಣಿಕರಿಗೆ ತೊಂದರೆಯಾಗದಂತೆ ಹುಬ್ಬಳ್ಳಿ ದಕ್ಷಿಣ ಮತ್ತು ಗದಗ ಬೈಪಾಸ್ ನಿಲ್ದಾಣಗಳಲ್ಲಿ ರೈಲು ನಿಲುಗಡೆ ಇರಲಿದೆ.

<><><>

ವಿಧಾನ ಪರಿಷತ್ ಚುನಾವಣೆ ಫಲಿತಾಂಶದಿಂದ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯಲ್ಲಿ ಬಿರುಕು ಮೂಡುತ್ತದೆ ಎಂಬ ವಿಶ್ಲೇಷಣೆಗಳನ್ನು ಜೆಡಿಎಸ್ ನಾಯಕ ಹಾಗೂ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಳ್ಳಿಹಾಕಿದ್ದಾರೆ. ಬೆಂಗಳೂರಿನ ಜೆಪಿ ಭವನದಲ್ಲಿ ಮಾಧ್ಯಮಗಳೊಂದಿಗೆ ಇಂದು ಮಾತನಾಡಿದ ಅವರು, ಈ ಮೈತ್ರಿಯನ್ನು ಮುರಿಯಲು ಯಾರಿಂದಲೂ ಸಾಧ್ಯವಿಲ್ಲ; ಅಡ್ಡ ಮತದಾನದಿಂದ ಸಾರ್ವತ್ರಿಕ ಚುನಾವಣೆ ಮೇಲೆ ಯಾವುದೇ ಪರಿಣಾಮ ಬೀರಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಚುನಾವಣೆಯಲ್ಲಿ ಜಯದ ಆಶಾಭಾವನೆಗಿಂತ, ಪ್ರಸ್ತುತ ಪರಿಸ್ಥಿತಿಯಲ್ಲಿ ಪಕ್ಷದ ಶಾಸಕರ ದೃಢತೆಯನ್ನು ಪರೀಕ್ಷಿಸಲು ನಾಯಕರಾದ ಬಿ.ವೈ.ವಿಜಯೇಂದ್ರ, ಆರ್.ಅಶೋಕ್ ಹಾಗೂ ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷರ ಸಹಮತದೊಂದಿಗೆ ಅಭ್ಯರ್ಥಿಯನ್ನು ಕಣಕ್ಕಿಳಿಸಲಾಗಿತ್ತು ಎಂದು ಅವರು ತಿಳಿಸಿದ್ದಾರೆ. ಜೆಡಿಎಸ್‌ನಿಂದ ಏಳು ಹಾಗೂ ಬಿಜೆಪಿಯಿಂದ ಮೂರು ಶಾಸಕರು ಅಡ್ಡ ಮತದಾನ ಮಾಡಿದ್ದಾರೆ ಎಂಬ ಚರ್ಚೆ ಮುಗಿದ ಅಧ್ಯಾಯ ಎಂದ ಅವರು, ಪಕ್ಷದಲ್ಲಿ ಭವಿಷ್ಯವಿಲ್ಲ ಎಂದುಕೊಳ್ಳುವವರು ನೇರವಾಗಿ ಹೇಳಿ ಹೋಗಬಹುದು ಎಂದು ಶಾಸಕರಿಗೆ ತಿಳಿಸಿರುವುದಾಗಿ ಹೇಳಿದ್ದಾರೆ. ಕ್ಷೇತ್ರಗಳಲ್ಲಿ ಕೆಲಸಗಳಾಗದ ಅಸಮಾಧಾನದ ಬೆನ್ನಲ್ಲೇ, ಕಾಂಗ್ರೆಸ್ ಸರ್ಕಾರ ಹೆಚ್ಚುವರಿ ಅನುದಾನದ ಆಮಿಷವೊಡ್ಡಿ ಶಾಸಕರನ್ನು ಸೆಳೆದಿದೆ ಎಂದು ಕೇಂದ್ರ ಸಚಿವರು ಗಂಭೀರ ಆರೋಪ ಮಾಡಿದ್ದಾರೆ.

<><><>

ರಾಜ್ಯ ಸರ್ಕಾರದ ಗೃಹಲಕ್ಷ್ಮಿ ಯೋಜನೆಯಲ್ಲಿ ವ್ಯಾಪಕ ಆರ್ಥಿಕ ಅಕ್ರಮಗಳು ಮತ್ತು ಆಡಳಿತಾತ್ಮಕ ಲೋಪಗಳು ನಡೆದಿವೆ ಎಂದು ಸಿಎಜಿ ವರದಿಯನ್ನು ಉಲ್ಲೇಖಿಸಿ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದು, ಈ ಬಗ್ಗೆ ಸಿಬಿಐ ತನಿಖೆಗೆ ಆಗ್ರಹಿಸಿದ್ದಾರೆ. ರಾಜ್ಯದ ಗ್ಯಾರಂಟಿ ಮಾದರಿಯನ್ನು ಭ್ರಷ್ಟಾಚಾರದ ಮಾದರಿ ಎಂದು ಕರೆದಿರುವ ಅವರು, ಫಲಾನುಭವಿಗಳ ಬ್ಯಾಂಕ್ ವಿವರಗಳಿಲ್ಲದೇ ೪೬.೫೨ ಕೋಟಿ ರೂಪಾಯಿ ವಿತರಿಸಲಾಗಿದೆ ಮತ್ತು ೧೯ ಸಾವಿರದ ೨೦ ಫಲಾನುಭವಿಗಳಿಗೆ ಒಂದೇ ಬ್ಯಾಂಕ್ ಖಾತೆ ಲಿಂಕ್ ಮಾಡಿ ನಕಲಿ ವಹಿವಾಟಿಗೆ ಅವಕಾಶ ನೀಡಲಾಗಿದೆ ಎಂದು ದೂರಿದ್ದಾರೆ. ಸಾರ್ವಜನಿಕ ಮತ್ತು

ತೆರಿಗೆದಾರರ ಹಣದ ದುರುಪಯೋಗದ ವಿರುದ್ಧ ಬಿಜೆಪಿ ಹೋರಾಟ ಮುಂದುವರಿಸಲಿದ್ದು, ಸಿಬಿಐನಿಂದ ಸ್ವತಂತ್ರ ತನಿಖೆಯಾಗಬೇಕು ಎಂದು ಪುನಃ ಆಗ್ರಹಿಸಿದ್ದಾರೆ.

<><><><>

ಮೇಕುದಾಟು ಸಮತೋಲನ ಜಲಾಶಯ ಮತ್ತು ಕುಡಿಯುವ ನೀರು ಯೋಜನೆಗೆ ವಿರೋಧ ವ್ಯಕ್ತಪಡಿಸಿ ತಮಿಳುನಾಡು ವಿಧಾನಸಭೆ ಅಂಗೀಕರಿಸಿರುವ ಏಕಪಕ್ಷೀಯ ನಿರ್ಣಯವನ್ನು ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ.ವಿಜಯೇಂದ್ರ ಖಂಡಿಸಿದ್ದಾರೆ. ಕಾವೇರಿ ನದಿ ನೀರಿನ ಮೇಲೆ ಕರ್ನಾಟಕಕ್ಕಿರುವ ಕಾನೂನು ಬದ್ಧ ಹಕ್ಕುಗಳನ್ನು ಯಾರೂ ಕಸಿದುಕೊಳ್ಳಲು ಸಾಧ್ಯವಿಲ್ಲ ಎಂದಿರುವ ಅವರು, ತಮಿಳುನಾಡು ಸರ್ಕಾರದ ಈ ಕ್ರಮ ಭಾರತದ ಒಕ್ಕೂಟ ವ್ಯವಸ್ಥೆಯ ಆಶಯಕ್ಕೆ ವಿರುದ್ಧವಾಗಿದೆ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಇದೇ ವೇಳೆ ಅವರು, ರಾಜ್ಯದ ನೆಲ, ಜಲ ಮತ್ತು ಭಾಷೆಯ ವಿಷಯದಲ್ಲಿ ಯಾವುದೇ ರಾಜೀ ಇಲ್ಲ ಎಂದಿದ್ದು, ರಾಜಕೀಯ ಲಾಭಕ್ಕಾಗಿ ಮತ್ತು ಚುನಾವಣಾ ಉದ್ದೇಶಕ್ಕಾಗಿ ಕಾವೇರಿ ವಿಷಯವನ್ನು ಪದೇ ಪದೇ ಬಳಸಿಕೊಳ್ಳುವುದನ್ನು ತಮಿಳುನಾಡು ಸರ್ಕಾರ ನಿಲ್ಲಿಸಬೇಕು ಎಂದು ಆಗ್ರಹಿಸಿದ್ದಾರೆ.

<><><><>

ಸಿಕಲ್‌ಸೆಲ್ ಅನಿಮಿಯಾ ಸ್ಕ್ರೀನಿಂಗ್‌ನಲ್ಲಿ ಮೈಸೂರು ಜಿಲ್ಲೆ ಶೇಕಡಾ ೧೦೦ ರಷ್ಟು ಪ್ರಗತಿ ಸಾಧಿಸಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕುಮಾರ್ ಸ್ವಾಮಿ.ಪಿ.ಸಿ ತಿಳಿಸಿದ್ದಾರೆ. ನಗರದಲ್ಲಿಂದು ವಿಶ್ವ ಸಿಕಲ್ ಸೆಲ್ ಅನಿಮಿಯಾ ದಿನ ಹಾಗೂ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಮೂರು ವರ್ಷದಿಂದ ಸಿಕಲ್‌ಸೆಲ್ ಅನಿಮಿಯಾ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದ್ದು, ಇದರ ಯಶಸ್ಸಿಗೆ ತಳಮಟ್ಟದಲ್ಲಿ ಕಾರ್ಯ ನಿರ್ವಹಿಸುವ ಆಶಾ ಕಾರ್ಯಕರ್ತೆಯರು ಪ್ರಮುಖ ಕಾರಣವಾಗಿದ್ದಾರೆ. ತಾಲ್ಲೂಕು ಮಟ್ಟದಲ್ಲಿ ಅಧಿಕಾರಿಗಳು ನಿಯಮಿತವಾಗಿ ಸಭೆಗಳನ್ನು ಹಾಗೂ ಕಾರ್ಯಾಗಾರ ನಡೆಸಿ ಮುಂದೆಯೂ ಇದೆ ರೀತಿಯ ಪ್ರಗತಿ ಸಾಧಿಸಬೇಕು ಎಂದು ಅವರು ಹೇಳಿದ್ದಾರೆ.

<><><><>

ಭಾರತೀಯ ಸೇನೆಯ ಎಲ್ಲ ಆರ್ಮಿ ಸರ್ವಿಸ್ ಕೋರ್-ಎಎಸ್‌ಸಿ ಘಟಕಗಳಿಗೆ ನೆರವಾಗಲು ಮೆಕಾನಿಕಲ್ ಸಂಚಾರ ಚಾಲಕರಿಗೆ ತರಬೇತಿ ನೀಡುವ ಪ್ರಮುಖ ಸಂಸ್ಥೆಯಾದ ಬೆಂಗಳೂರಿನ

ಆರ್ಮಿ ಸರ್ವಿಸಸ್ ಕೋರ್ ಕೇಂದ್ರದಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಅಗ್ನಿಪಥ್ ಯೋಜನೆಯಡಿ ದಾಖಲಾಗಿದ್ದ ಅಗ್ನಿವೀರರ ೮ನೇ ಬ್ಯಾಚ್‌ನ ನಿರ್ಗಮನ ಪಥಸಂಚಲನ ಇಂದು ನಡೆಯಿತು. ಈ ವೇಳೆ ಅರ್ಹತೆ ಪಡೆದ ಅತ್ಯುನ್ನತ ಅಗ್ನಿವೀರರಿಗೆ ಉತ್ತರ ವಿಭಾಗದ ಆರ್ಮಿ ಸರ್ವಿಸ್ ಕೋರ್‌ನ ಕಮಾಂಡೆಂಟ್ ಬ್ರಿಗೇಡಿಯರ್ ವಿಕ್ರಮ್ ಶೆಖಾವತ್ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

<><><><>

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ ೨೩ ನೇ ಕಂತಿನ ಹಣ ರೈತರ ಖಾತೆಗೆ ಜಮೆಯಾಗುತ್ತಿದ್ದು, ಕೋಲಾರ ಜಿಲ್ಲೆಯ ೯೧ ಸಾವಿರದ ೮೪೧ ಫಲಾನುಭವಿಗಳಿಗೆ ೧೮ ಕೋಟಿ ೩೬ ಲಕ್ಷ ರೂಪಾಯಿ ಅನುದಾನ ಬಿಡುಗಡೆಯಾಗುತ್ತಿದೆ ಎಂದು ಕೃಷಿ ಜಂಟಿ ನಿರ್ದೇಶಕಿ ಮಂಜುಳಾ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಮುಂಗಾರು ಹಂಗಾಮಿನಲ್ಲಿ ರೈತರು ಬಿತ್ತನೆ ಬೀಜ, ರಸಗೊಬ್ಬರ, ಇನ್ನಿತರ ಕೃಷಿ ಚಟುವಟಿಕೆಗಳಿಗೆ ಈ ಹಣದಿಂದ ಸಾಕಷ್ಟು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

<><><><>

ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಇಂದು ಶ್ರೀರಂಗಪಟ್ಟಣ ತಾಲ್ಲೂಕು ಕಚೇರಿಗೆ ದಿಢೀರ್ ಭೇಟಿ ನೀಡಿ, ವಿವಿಧ ಶಾಖೆಗಳ ಕಾರ್ಯನಿರ್ವಹಣೆ, ಕಡತಗಳ ವಿಲೇವಾರಿ, ಸಿಬ್ಬಂದಿಗಳ ಹಾಜರಾತಿ ಹಾಗೂ ಸಾರ್ವಜನಿಕ ಸೇವೆಗಳ ಅನುಷ್ಠಾನವನ್ನು ಸಮಗ್ರವಾಗಿ ಪರಿಶೀಲಿಸಿದರು. ಪರಿಶೀಲನೆ ವೇಳೆ ಸರ್ಕಾರದ ಕೆಎಎಸ್‌ಎಂಎಸ್  ಕರ್ತವ್ಯ ಆಪ್ ಅನ್ನು ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಡ್ಡಾಯವಾಗಿ ಡೌನ್‌ಲೋಡ್ ಮಾಡಿಕೊಂಡು, ಇ-ಹಾಜರಾತಿಯನ್ನು ನಿಯಮಿತವಾಗಿ ದಾಖಲಿಸಬೇಕು ಎಂದು ಸೂಚಿಸಿದರು. ಸರ್ಕಾರದ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಕಚೇರಿ ಶಿಸ್ತು ಕಾಪಾಡುವಂತೆ ತಿಳಿಸಿದ್ದಾರೆ.

<><><><>

ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ  ೨೦೨೬ ಅನ್ನು ಜಿಲ್ಲೆಯಲ್ಲಿ ಅತ್ಯಂತ ಪಾರದರ್ಶಕ, ದೋಷಮುಕ್ತ ಹಾಗೂ ಸುರಕ್ಷಿತ ವಾತಾವರಣದಲ್ಲಿ ನಡೆಸಲು ಜಿಲ್ಲಾಡಳಿತ ಸಂಪೂರ್ಣವಾಗಿ ಸನ್ನದ್ಧವಾಗಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ನೀಟ್ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಪರೀಕ್ಷೆಯನ್ನು ಯಾವುದೇ

ಲೋಪದೋಷಗಳಿಲ್ಲದೆ ಯಶಸ್ವಿಯಾಗಿ ನಡೆಸಲು ಅಧಿಕಾರಿಗಳಿಗೆ ಹಲವು ನಿರ್ದೇಶನಗಳನ್ನು ನೀಡಿ, ಪರೀಕ್ಷೆ ಆರಂಭವಾಗುವ ಮುನ್ನ ಎಲ್ಲಾ ಪರೀಕ್ಷಾ ಕೇಂದ್ರಗಳು ಸಂಪೂರ್ಣವಾಗಿ ಸಜ್ಜಾಗಿರಬೇಕು ಎಂದು ಆದೇಶಿಸಿದ್ದಾರೆ.

<><><><>

ಬಿಡದಿ ಟೌನ್ ಷಿಪ್ ವಿರೋಧಿಸಿ ಕಳೆದ ಒಂದೂವರೆ ವರ್ಷದಿಂದ ರೈತರು ವಿರೋಧ ವ್ಯಕ್ತಪಡಿಸಿದರೂ ಸರ್ಕಾರ ಸ್ಪಂದನೆ ನೀಡದ ಹಿನ್ನಲೆ ನಾಳೆ ಜೆಡಿಎಸ್ ವತಿಯಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಶಾಸಕ ಎ.ಮಂಜುನಾಥ್ ಹೇಳಿದ್ದಾರೆ. ರಾಮನಗರ ತಾಲ್ಲೂಕಿನ ಬಿಡದಿಯಲ್ಲಿ ನಿನ್ನೆ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಒಂದೂವರೆ ವರ್ಷದಿಂದ ನಿರಂತರ ಹೋರಾಟ ನಡೆಯುತ್ತಿದ್ದರು ಸರ್ಕಾರ ಸ್ಪಂದಿಸದ ಹಿನ್ನಲೆಯಲ್ಲಿ ಅಂಚಿಪುರದಿಂದ ಹೊಸೂರು ಗ್ರಾಮದವರೆಗೆ ಸುಮಾರು ಹತ್ತು ಗ್ರಾಮಗಳ ಮೂಲಕ ಪಾದಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಸಾವಿರಾರು ಸಂಖ್ಯೆಯಲ್ಲಿ ರೈತರು ಪಾಲ್ಗೊಳ್ಳುತ್ತಿದ್ದು, ಜೆಡಿಎಸ್ ಪ್ರಮುಖ ನಾಯಕರು ಭಾಗವಹಿಸಲಿದ್ದಾರೆ ಎಂದು ಹೇಳಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ಕೈಮಗ್ಗ ಮತ್ತು ಜವಳಿ ಇಲಾಖೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ವತಿಯಿಂದ ಪ್ರಸಕ್ತ ಸಾಲಿಗೆ ನೇಕಾರ ಸಮ್ಮಾನ್ ಯೋಜನೆಯಡಿ ಜಿಲ್ಲೆಯಲ್ಲಿರುವ ಪ್ರತಿ ಕೈಮಗ್ಗ/ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಲ್ಲಿ ತೊಡಗಿರುವ ನೇಕಾರರಿಗೆ ವಾರ್ಷಿಕ ೫ ಸಾವಿರ ರೂಪಾಯಿಗಳ ಆರ್ಥಿಕ ನೆರವನ್ನು ನೀಡುವ ಸಲುವಾಗಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರ ಮಾಹಿತಿಯನ್ನು ಅಪ್‌ಲೋಡ್ ಮಾಡಲು ಅನುಕೂಲವಾಗುವಂತೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>